ಇ) ಫಲಾನುಭವಿಗಳು ತಮ್ಮ ಮನೆಗಳನ್ನು ತಾವೇ ಸ್ವತಃ ನಿರ್ಮಿಸಿಕೊಳ್ಳಲು ಮೊದಲ ಆದ್ಯತೆ ನೀಡಲಾಗುತ್ತಿದ್ದು, ಫಲಾನುಭವಿಗಳು ಮನೆ ಕಟ್ಟಲು ಸಾಧ್ಯವಿಲ್ಲವೆಂದು ಒಪ್ಪಿಗೆ ಪತ್ರ ನೀಡಿದಲ್ಲಿ ಮಾತ್ರ ಸ್ಥಳೀಯ ಸಂಸ್ಥೆಗಳು ಏಜೆನ್ಸಿಗಳಿಗೆ ಕಾಮಗಾರಿ ಆದೇಶ ನೀಡಿ ಮನೆಗಳನ್ನು ನಿರ್ಮಿಸಲು ಅವಕಾಶ ಇರುತ್ತದೆ

ಈ) 2005–06 ಮತ್ತು 2006–07ನೇ ಸಾಲಿನಲ್ಲಿ ವಿವಿಧ ಯೋಜನೆಯಿಂದ ಹಣ ಪಡೆದ ಫಲಾನುಭವಿಗಳು ಮನೆಗಳನ್ನು ಕಟ್ಟಿಕೊಳ್ಳಲು ಸಾಧ್ಯವಾಗದೇ ಸರ್ಕಾರಕ್ಕೆ ಮರು ಸಂದಾಯ ಮಾಡಿರುವ ಪ್ರಕರಣಗಳು ಬಂದಿರುವುದಿಲ್ಲ

ಉ) ಉದ್ಭವಿಸುವುದಿಲ್ಲ

477(359) ಶ್ರೀ ಧ್ರುವನಾರಾಯಣ ಆರ್ (ಸಂತೇಮರಳ್ಳಿ) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ,

ಅ) ಕರ್ನಾಟಕ ರಾಜ್ಯದಲ್ಲಿ ಮುಂದುವರಿಕೆ ಶಿಕ್ಷಣ ಕೇಂದ್ರಗಳ ಸಂಖ್ಯೆ ಎಷ್ಟು,

ಆ) ಈ ಕೇಂದ್ರಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಶಿಕ್ಷಣ ಸಂಯೋಜಕರ ಸಂಖ್ಯೆ ಎಷ್ಟು,

ಇ) ಈ ಕೇಂದ್ರಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಪ್ರೇರಕ/ ಸಹ ಪ್ರೇರಕರ ಸಂಖ್ಯೆ ಎಷ್ಟು,

ಈ) ಪ್ರೇರಕ/ ಸಹ ಪ್ರೇರಕರುಗಳಿಗೆ ಎಷ್ಟು ತಿಂಗಳ ಗೌರವಧನ ಸರ್ಕಾರದಿಂದ ಪಾವತಿಯಾಗಬೇಕಾಗಿದೆ, ನಿಯಮಿತವಾಗಿ ಗೌರವಧನ ಪಾವತಿಯಾಗದಿರಲು ಕಾರಣವೇನು,

ಉ) ಇದು ಸರ್ಕಾರದ ಗಮನಕ್ಕೆ ಬಂದಿದೆಯೇ, ಬಂದಿದ್ದಲ್ಲಿ, ಸರ್ಕಾರ ತೆಗೆದುಕೊಂಡಿರುವ ಕ್ರಮವೇನು,

ಊ) ಈ ಕೇಂದ್ರಗಳಿಗೆ ಸ್ವಂತ ಕಟ್ಟಡದಲ್ಲಿ ಕಾರ್ಯನಿರ್ವಹಿಸಲು ಸೌಲಭ್ಯವಿದೆಯೇ,

ಋ) ಈ ಕೇಂದ್ರಗಳಿಗೆ ಒದಗಿಸಿರುವ ಮೂಲಭೂತ ಸೌಕರ್ಯಗಳೇನು?

ಶ್ರೀ ಬಸವರಾಜ ಎಸ್ ಹೊರಟ್ಟಿ (ಪ್ರಾಥಮಿಕ ಮತ್ತು ವೌಢ ಶಿಕ್ಷಣ ಸಚಿವರು)

ಅ) ಕರ್ನಾಟಕ ರಾಜ್ಯದಲ್ಲಿರುವ
ಮುಂದುವರಿಕೆ ಶಿಕ್ಷಣ ಕೇಂದ್ರಗಳ ಸಂಖ್ಯೆ 16629
ನೋಡಲ್ ಮುಂದುವರಿಕೆ ಶಿಕ್ಷಣ ಕೇಂದ್ರಗಳ ಸಂಖ್ಯೆ 1737
ಒಟ್ಟು **18366**

ಆ) ಈ ಕೇಂದ್ರಗಳಲ್ಲಿ ಶಿಕ್ಷಣ ಸಂಯೋಜಕರು ಯಾರೂ ಕಾರ್ಯನಿರ್ವಹಿಸುತ್ತಿಲ್ಲವಾದ್ದರಿಂದ ಈ ಪ್ರಶ್ನೆ ಉದ್ಭವಿಸುವುದಿಲ್ಲ

ಇ) ಈ ಕೇಂದ್ರಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಪ್ರೇರಕ ಸಂಖ್ಯೆ 18316, ಸಹ ಪ್ರೇರಕರ ಸಂಖ್ಯೆ 17476

ಈ) ಮುಂದುವರಿಕೆ ಶಿಕ್ಷಣ ಕಾರ್ಯಕ್ರಮವು 5 ವರ್ಷಗಳ ಯೋಜನೆಯಾಗಿದ್ದು ಕೇಂದ್ರ ಸರ್ಕಾರದ ಪ್ರಾಯೋಜಿತ ಕಾರ್ಯಕ್ರಮವಾಗಿದೆ ಕೇಂದ್ರ ಸರ್ಕಾರದಿಂದ ಅನುದಾನ ಬಿಡುಗಡೆ ಆದಂತೆಲ್ಲ ಪ್ರೇರಕರ/ ಸಹ ಪ್ರೇರಕರ ಗೌರವಧನವನ್ನು ನೀಡಲಾಗುತ್ತಿದೆ ವಿವಿಧ ಕಾರಣಗಳಿಗಾಗಿ ಕೇಂದ್ರ ಸರ್ಕಾರದಿಂದ ಅನುದಾನ ಬಿಡುಗಡೆ ವಿಳಂಬವಾದ ಅವಧಿಗೆ ಗೌರವಧನ ಸರ್ಕಾರದಿಂದ ಪಾವತಿಸಲು ಸಾಧ್ಯವಾಗುತ್ತಿಲ್ಲ

ಉ) ಹೌದು

ಈ ಸಂಬಂಧ ಹಮ್ಮಿಕೊಂಡಿರುವ 16 ಯೋಜನೆಗಳನ್ನು, ಅನುದಾನ ಬಿಡುಗಡೆಗಾಗಿ ಗೌರವಧನ ಪಾವತಿಸಲಾಗಿದೆ ಅಲ್ಲದೇ, ಬಳಕೆ ಪತ್ರ ಸಲ್ಲಿಸಿರುವ ಜಿಲ್ಲೆಗಳ ಮಟ್ಟಿಗೆ ಮರು ಹೊಂದಾಣಿಕೆಯ ಷರತ್ತಿಗೊಳಪಟ್ಟು ಕರ್ನಾಟಕ ರಾಜ್ಯ ಸಾಕ್ಷರತಾ ಮಿಷನ್ ಪ್ರಾಧಿಕಾರದ ವತಿಯಿಂದ ಮೂರು ತಿಂಗಳ ಪ್ರೇರಕರ ಗೌರವ ಧನವನ್ನು ಪಾವತಿಸಲು ಮುಂಗಡವಾಗಿ ಹಣ ಬಿಡುಗಡೆ ಮಾಡಲು ಕ್ರಮ ಕೈಗೊಂಡಿದೆ

ಊ) ಇಲ್ಲ

ಋ) ಕೇಂದ್ರ ಸರ್ಕಾರದ ಮೊದಲನೇ ವರ್ಷದ ಅನುದಾನದಲ್ಲಿ ಪ್ರತಿ ಮುಂದುವರಿಕೆ ಶಿಕ್ಷಣ ಕೇಂದ್ರಕ್ಕೆ ಕೆಳಕಂಡಂತೆ ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗಿರುತ್ತದೆ

1 ಪೀರೋಪಕರಣಗಳು

2 ಕ್ರೀಡಾ/ಮನರಂಜನಾ ಸಾಮಗ್ರಿಗಳು

3 ನಕ್ಷೆ, ಭೂಪಟ

4 ಪುಸ್ತಕಗಳು

5 ಬೈಸಿಕಲ್

478(360) ಶ್ರೀ ಧ್ರುವನಾರಾಯಣ ಆರ್ (ಸಂತೇಮರಳ್ಳಿ) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ,

ಅ) ರಾಜ್ಯದಲ್ಲಿರುವ ಗ್ರಾಮ ಪಂಚಾಯತಿಗಳಿಗೆ ಮಂಜೂರಾಗಿರುವ ಕಾರ್ಯದರ್ಶಿಗಳ ಹುದ್ದೆ ಎಷ್ಟು,

ಆ) ಖಾಲಿ ಇರುವ ಕಾರ್ಯದರ್ಶಿಗಳ ಹುದ್ದೆ ಭರ್ತಿ ಮಾಡಲು ಸರ್ಕಾರ ತೆಗೆದುಕೊಂಡಿರುವ ಕ್ರಮವೇನು,

ಇ) ಈ ಕಾರ್ಯದರ್ಶಿಗಳ ಹುದ್ದೆಯನ್ನು ಮೇಲ್ದರ್ಜೆಗೇರಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮವೇನು?

ಶ್ರೀ ಸಿ ಎಂ ಉದಾಸಿ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು)

ಅ) 5652

ಆ) ನೇರ ನೇಮಕಾತಿ ಕೋಟಾದಡಿಯ ಹುದ್ದೆಗಳನ್ನು ಭರ್ತಿ ಮಾಡಲು ಆರ್ಥಿಕ ಇಲಾಖೆಯ ಅನುಮೋದನೆಗೆ ಪ್ರಸ್ತಾವನೆ ಸಲ್ಲಿಸಲಾಗಿದೆ

ಗ್ರೇಡ್–2 ವೃಂದ ಬಲದ ಶೇಕಡಾ 40ರಷ್ಟರ ಕೋಟಾದಡಿ ಖಾಲಿ ಇರುವ ಹುದ್ದೆಗಳಿಗೆ ಬಿಲ್ ಕಲೆಕ್ಟರ್ ಸಮೂಹದ ಸಿಬ್ಬಂದಿಗಳು ಸತತ 10 ವರ್ಷ ಪೂರೈಸಿದವರಿಗೆ ಜೇಷ್ಠತಾ ಆಧಾರದ ಮೇಲೆ ನಿಯಮಾವಳಿಗನುಸಾರ ನೇಮಕಾತಿ ಮಾಡಲಾಗುವುದು

ಗ್ರೇಡ್–1 ವೃಂದದಲ್ಲಿ ಬಡ್ತಿ ಕೋಟಾದಡಿ ಖಾಲಿ ಇರುವ ಹುದ್ದೆಗಳಿಗೆ ಅರ್ಹ ಗ್ರೇಡ್–2 ಕಾರ್ಯದರ್ಶಿಗಳಿಗೆ ಬಡ್ತಿ ನೀಡಲು ಕ್ರಮವಹಿಸಲಾಗುತ್ತದೆ

ಇ) ಈಗಿರುವ ಗ್ರಾಮ ಪಂಚಾಯತಿ ಕಾರ್ಯದರ್ಶಿ ಹುದ್ದೆಗಳನ್ನು ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿ ಇಲ್ಲ